**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ರವರ**
**ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಪ್ರಶ್ನೆ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚೆಗೆ ಮಂಗಳೂರು ಮತ್ತು ಬಂಟ್ವಾಳ ತಾಲ್ಲೂಕಿನಲ್ಲಿ ನಡೆದ 02 ಕೊಲೆಗಳ ಹಿಂದೆ ಪ್ರಚೋದನಾಕಾರಿ ಭಾಷಣ ಕಾರಣವಾಗಿದ್ದು, ಈ ಕೊಲೆಗಳ ಪ್ರಕರಣದಲ್ಲಿ ಮೃತರ ಕುಟುಂಬಗಳಿಗೆ ಪರಿಹಾರ ಧನ ಮತ್ತು ಪ್ರಚೋದನಾಕಾರಿ ಭಾಷಣಗಳನ್ನು ತಡೆಯಲು ಕರಾವಳಿ ಜಿಲ್ಲೆಯಲ್ಲಿ ಕೋಮು ಸೌಹಾರ್ದತೆಯನ್ನು ಕಾಪಾಡಲು ಇಲಾಖೆ ಕೈಗೊಂಡಿರುವ ಕ್ರಮಗಳ ಬಗ್ಗೆ.

**ಉತ್ತರ:** ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಕುರಿಯಾಳ ಗ್ರಾಮದ ಈರಾಕೋಡಿ ಎಂಬಲ್ಲಿ ದಿನಾಂಕ: 27.05.2025 ರಂದು ದುಷ್ಕರ್ಮಿಗಳು ಅಬ್ದುಲ್ ರಹಿಮಾನ್ ಮತ್ತು ಕಲಂದರ್ ಶಾಫಿ ರವರ ಮೇಲೆ ಮಾರಕಾಯುಧಗಳಿಂದ ಹಲ್ಲೆ ನಡೆಸಿದ್ದು, ಅಬ್ದುಲ್ ರಹಿಮಾನ್ ರವರು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ. ಈ ಸಂಬಂಧ ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ:54/2025 ಕಲಂ: 191[1], 191[2], 191[3], 118[1], 118 [2], 109, 103 ಜೊತೆಗೆ 190 ಬಿಎನ್‌ಎಸ್ 2023 ರನ್ವಯ ಪ್ರಕರಣ ದಾಖಲಾಗಿರುತ್ತದೆ. ಸದರಿ ಪ್ರಕರಣದಲ್ಲಿ ಒಟ್ಟು 12 ಜನ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ.

ಮಂಗಳೂರು ನಗರದ ಕಮಿಷನರೇಟ್ ವ್ಯಾಪ್ತಿಯಲ್ಲಿ 2025ನೇ ಸಾಲಿನ ಏಪ್ರಿಲ್ ತಿಂಗಳಲ್ಲಿ ಶ್ರೀ ಮೊಹಮ್ಮದ್ ಅಶ್ರಫ್ ಮೂಚಿಕ್ಕದನ್ ಎಂಬಾತನ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಗಳೂರು ಗ್ರಾಮಾಂತರ ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ 37/2025 ಕಲಂ: 189 (2) 191(1), (3), 115(2), 103(2), 240 ಜೊತೆಗೆ 190 ಭಾರತೀಯ ನ್ಯಾಯ ಸಂಹಿತೆ-2023 ರಂತೆ ದಾಖಲಾಗಿರುತ್ತದೆ. ದಾಖಲಾದ ಕೊಲೆ ಪ್ರಕರಣಗಳಲ್ಲಿ ಮೃತ/ ಗಾಯಾಳುಗಳ ಕುಟುಂಬಗಳಿಗೆ ಜಿಲ್ಲಾಡಳಿತದ ವತಿಯಿಂದ ಪರಿಹಾರ ನೀಡಿರುವುದಿಲ್ಲ.

**ಕೋಮು ಸೌಹಾರ್ದತೆಯನ್ನು ಕಾಪಾಡಲು ಇಲಾಖೆ ಕೈಗೊಂಡಿರುವ ಕ್ರಮಗಳ ವಿವರ:-**

1. ರಾಜ್ಯದಲ್ಲಿ ಕೋಮುಗಲಭೆಗಳನ್ನು ನಿಯಂತ್ರಿಸಲು ಹೊಸದಾಗಿ ವಿಶೇಷ ಕಾರ್ಯಪಡೆಯನ್ನು ಸ್ಥಾಪಿಸಲಾಗಿದೆ.
2. ಸಮಾಜಘಾತಕ ವ್ಯಕ್ತಿಗಳ ಕಾನೂನುಬಾಹಿರ ಚಟುವಟಿಕೆಗಳನ್ನು ಹತ್ತಿಕ್ಕಲು ಸರ್ಕಾರದ ನಿಬಂಧನೆಗಳ ಮೇರೆಗೆ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಂಡು ಸಂಘಟಿತ ವ್ಯಕ್ತಿಗಳ ಕಾರ್ಯಚಟುವಟಿಕೆಗಳನ್ನು ನಿಯಂತ್ರಿಸಲಾಗುತ್ತಿದೆ. **ಉದಾ:-** ಬಿ.ಎನ್.ಎಸ್.ಎಸ್ ರನ್ವಯ ಭದ್ರತಾ ಕಾಯ್ದೆಯಡಿ, "Goonda Act" (The Karnataka Prevention of Dangerous Activities of Bootleggers, Drug-Offenders, Gamblers, Goondas, [Immoral Traffic Offenders, Slum-Grabbers and Video or Audio Pirates] Act, 1985) Kcoca (The

Scanned with OKEN Scanner

Karnataka Control of Organised Crime Act 2000) ರನ್ವಯ ಸಂಘಟಿತ ಅಪರಾಧಗಳಲ್ಲಿ ತೊಡಗುವವರ ಮೇಲೆ ನಿಗಾ ಇರಿಸಲಾಗುತ್ತಿದೆ.

3. ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟ ಮಾಡುವವರ ವಿರುದ್ಧ ಪ್ರಕರಣವನ್ನು ದಾಖಲಿಸಲಾಗುತ್ತಿದೆ.
4. ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ, ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಕಿಡಿಗೇಡಿಗಳನ್ನು ಗಡಿಪಾರು ಮಾಡುವ ಬಗ್ಗೆ, ಕಟ್ಟು ನಿಟ್ಟಿನ ಕಾನೂನು ರೀತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
5. ದ್ವೇಷ ಭಾಷಣ ಮಾಡುವವರ ವಿರುದ್ಧ ಪ್ರಕರಣವನ್ನು ದಾಖಲಿಸಲಾಗುತ್ತಿದ್ದು, ಸದರಿಯವರ ಮೇಲೆ ಸದ್ವರ್ತನೆಗಾಗಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆಯ ಅನ್ವಯ ಮುಂಜಾಗ್ರತಾ ಕ್ರಮದ ವರದಿಗಳನ್ನು ತಯಾರಿಸಿ ಸಂಬಂಧಪಟ್ಟ ತಾಲ್ಲೂಕು ದಂಡಾಧಿಕಾರಿಗಳಿಗೆ ಸಲ್ಲಿಸಿ, ಮುಚ್ಚಳಿಕೆಯನ್ನು ಪಡೆದುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.
6. ರೌಡಿ ಶೀಟರ್‌ಗಳ ಚಲನವಲನಗಳ ಮೇಲೆ ಸೂಕ್ತ ನಿಗಾ ಇರಿಸಿ, ಅವರನ್ನು ಹದ್ದುಬಸ್ತಿನಲ್ಲಿಡಲು ಭದ್ರತಾ ಕಾಯ್ದೆಯಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.
7. ಕೋಮು ಗಲಭೆ ಮತ್ತು ಕೋಮು ಸಂಘರ್ಷಗಳಂತಹ ಸನ್ನಿವೇಶಗಳನ್ನು ತಡೆಗಟ್ಟಲು ಸರ್ಕಾರದಿಂದ ವಿಶೇಷ ಕಾರ್ಯಪಡೆಯನ್ನು (Special Action Force) ಸ್ಥಾಪನೆ ಮಾಡಲಾಗಿರುತ್ತದೆ. ಕೋಮು ಸೂಕ್ಷ್ಮ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ವಿಶೇಷ ಕಾರ್ಯಪಡೆಗಳಿಂದ ಪಥಸಂಚಲನವನ್ನು ತೀವ್ರ ಗೊಳಿಸಿ ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಸ್ಥಾಪನೆಯಾಗಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
8. ಸಭೆ-ಸಮಾರಂಭ ನಡೆಸುವ ಆಯೋಜಕರಿಗೆ, ಕಾರ್ಯಕ್ರಮದಲ್ಲಿ ಭಾಗವಹಿಸುವ ಮುಖಂಡರ ಮಾಹಿತಿ, ಸೇರುವ ಜನರ ಮಾಹಿತಿ, ಭಾಷಣ ಮಾಡುವವರ ಮಾಹಿತಿಯನ್ನು ಮುಂಗಡವಾಗಿ ಪಡೆದು, ಆಯೋಜಕರಿಗೆ ಪ್ರಚೋದನಕಾರಿ ಹೇಳಿಕೆ/ಭಾಷಣ ಮಾಡಿದ್ದಲ್ಲಿ ಆಯೋಜಕರ ಮೇಲೆ ಮತ್ತು ಭಾಷಣ ಮಾಡಿದವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗುತ್ತಿದೆ.
9. ಠಾಣಾ ಮಟ್ಟದಲ್ಲಿ ಸೋಶಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್ ಅನ್ನು ತೆರೆದು ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಲಾಗುತ್ತಿದ್ದು, ಕಾನೂನು ಸುವ್ಯಸ್ಥೆಗೆ ಧಕ್ಕೆ ತರಬಹುದಾದ ಸುಳ್ಳು ಸುದ್ದಿಗಳು, ಪ್ರಚೋದನಕಾರಿ ಸಂದೇಶಗಳು/ ಪೋಸ್ಟ್‌ಗಳು ಹಾಗೂ ವಿಡಿಯೋಗಳನ್ನು ಬಿತ್ತರಿಸುವವರ ವಿರುದ್ಧ ಪ್ರಕರಣವನ್ನು ದಾಖಲಿಸಿ, ಆರೋಪಿಗಳನ್ನು ಪತ್ತೆ ಹಚ್ಚಿ ದಸ್ತಗಿರಿ ಮಾಡಲಾಗುತ್ತಿದೆ.

---

ಹೆಚ್‌ಡಿ 315 ಪಿಸಿಇ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

Scanned with OKEN Scann